ಕರ್ನಾಟಕ ಸರ್ಕಾರ

# ಆಯುಕ್ತರ ಕಚೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಕೇಂದ್ರೀಕೃತ ದಾಖಲಾತಿ ಘಟಕ, ಕಾವೇರಿ ಭವನದ ಎದುರು, ಕೆ.ಜಿ. ರಸ್ತೆ ಬೆಂಗಳೂರು-560 009

--------

ಸಂಖ್ಯೆ:ಸಿ.ಎ.ಸಿ: 6: ಪ್ರಾಶಾಶಿನೇ: 2014-15 ದಿನಾಂಕ: 21-01-2016

## ಜ್ಞಾಪನ

ವಿಷಯ: ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿಯ ಆದೇಶ ನೀಡುವಲ್ಲಿ ಕೈಗೊಳ್ಳಬೇಕಾದ ಅಗತ್ಯ ಕ್ರಮಗಳು.

ಉಲ್ಲೇಖ:1. ಸರ್ಕಾರದ ಅಧಿಕೃತ ಪ್ರಕಟಣೆ ಸಂ:ಇಡಿ:ಡಿಪಿಎಆರ್:41:ಎಸ್ಆರ್ಇ:2001, ದಿ: 09.08.2001.
2. ಸರ್ಕಾರಿ ಆದೇಶ ಸಂಖ್ಯೆ: ಇಡಿ 626 ಪಿಬಿಎಸ್ 2014 ದಿನಾಂಕ: 31-01-2015.
3. ಸರ್ಕಾರಿ ಆದೇಶ ಸಂಖ್ಯೆ: ಇಡಿ 626 ಪಿಬಿಎಸ್ 2014 ದಿನಾಂಕ: 21-11-2015.
4. ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ:43:ಹೆಚ್‌ಕೆಸಿ 2013, ದಿನಾಂಕ:29-01-2014
5. ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ:33:ಹೈಕಉ 2013, ದಿನಾಂಕ:10-04-2014
6. ನೇಮಕಾತಿ ಅಧಿಸೂಚನೆ ಸಂಖ್ಯೆ: ಇ2:ಪ್ರಾ.ಶಾ.ಶಿ.ನೇಮಕ: 01/2014-15 ದಿನಾಂಕ: 23ನೇ ಮಾರ್ಚಿ 2015.
7. ತಿದ್ದುಪಡಿ ಅಧಿಸೂಚನೆ ಸಂಖ್ಯೆ: ದಿನಾಂಕ 26ನೇ ನವೆಂಬರ್ 2015.
8. ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರುರವರ ಪ್ರಕ್ರಿಯೆ ಮುಂದುವರೆಸಲು ಆದೇಶ ಸಂಖ್ಯೆ: ಸಿ3(1):ಪ್ರಾ.ಶಾ.ಶಿ.ನೇ.02/2014-15 ದಿನಾಂಕ 25-11-2015.
9. ದಿನಾಂಕ: 20-01-2016 ರಂದು ಪ್ರಕಟಿಸಲಾದ ಹುದ್ದೆವಾರು ಅಂತಿಮ ಆಯ್ಕೆ ಪಟ್ಟಿ.
10. **ಕೌನ್ಸಿಲಿಂಗ್ ದಿನಾಂಕ: 25-01-2016, 27-01-2016 ಮತ್ತು 28-01-2016**

********

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಗಳಿಗೆ ಅನ್ವಯಿಸಿದಂತೆ ಈ ಕೆಳಕಂಡ ಅಂಶಗಳನ್ನು ಗಮನದಲ್ಲಿರಿಸಿಕೊಂಡು ಶಿಕ್ಷಣ ಇಲಾಖಾ ನಿಯಮಾನುಸಾರ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿಯ ಪ್ರಕ್ರಿಯೆಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಲು ಸೂಚಿಸಲಾಗಿದೆ.

1. **ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳಲ್ಲಿ ಸರ್ವ ಶಿಕ್ಷಣ ಅಭಿಯಾನದಡಿಯಲ್ಲಿ ಮಂಜೂರಾಗಿ ಖಾಲಿ ಇರುವ ಹುದ್ದೆಗಳನ್ನು ಆದ್ಯತೆ ಮೇರೆಗೆ ಭರ್ತಿ ಮಾಡಲು ಸೂಚಿಸಲಾಗಿದೆ.**
2. ದಿನಾಂಕ:22-01-2016ರ ಶುಕ್ರವಾರದಂದು ಪ್ರಾಥಮಿಕ ಶಾಲಾ ಶಿಕ್ಷಕ ಅಭ್ಯರ್ಥಿಗಳ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಣೆ ಮಾಡತಕ್ಕದ್ದು.
3. ದಿನಾಂಕ:22-01-2016 ರಂದು ಸ್ಥಳೀಯ ಹಾಗೂ ಜಿಲ್ಲೆಯ ದಿನ ಪತ್ರಿಕೆಗಳಿಗೆ ತಾತ್ಕಾಲಿಕ ಕೌನ್ಸಿಲಿಂಗ್ ದಿನಾಂಕಗಳ ವೇಳಾ ಪಟ್ಟಿಯ ಪ್ರಕಟಣೆಯನ್ನು ನೀಡಬೇಕು.
4. ಆಯ್ಕೆ ಪಟ್ಟಿಯಲ್ಲಿರುವ ಅಭ್ಯರ್ಥಿಗಳಿಗೆ ದೂರವಾಣಿ ಮೂಲಕ ತಾತ್ಕಾಲಿಕ ಕೌನ್ಸಿಲಿಂಗ್ (Counselling) ದಿನಾಂಕ ಮತ್ತು ಸ್ಥಳವನ್ನು ತಿಳಿಸಬೇಕು.
5. ದಿನಾಂಕ: 25-01-2016ರ ಬೆಳಗ್ಗೆ 8-00 ಘಂಟೆಗೆ ಕೌನ್ಸಿಲಿಂಗ್ ರೋಸ್ಟರ್/ಮೆರಿಟ್ ಆಧಾರಿತ ಪಟ್ಟಿ ಹಾಗೂ ಖಾಲಿ ಹುದ್ದೆಗಳ ವಿವರಗಳನ್ನು ಆಯಾ ಜಿಲ್ಲೆಯ ಉಪನಿರ್ದೇಶಕರು (ಆಡಳಿತ) ಇವರ ಕಛೇರಿಯ ನಾಮಫಲಕದಲ್ಲಿ ಪ್ರಕಟಿಸಲೇಬೇಕು.

6. ಆಯ್ಕೆ ಪ್ರಾಧಿಕಾರ ಮತ್ತು ನೇಮಕಾತಿ ಪ್ರಾಧಿಕಾರಗಳು ನೇಮಕಾತಿ ಆದೇಶದ ಮಾದರಿ ಪ್ರತಿಗಳಿಗನುಗುಣವಾಗಿ ನಿಮ್ಮ ಜಿಲ್ಲೆಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶದ ಪ್ರತಿಗಳನ್ನು ಸಿದ್ಧಪಡಿಸಿ ಇಟ್ಟುಕೊಳ್ಳತಕ್ಕದ್ದು.
7. ಶೈಕ್ಷಣಿಕ ಅರ್ಹತೆಗೆ ಸಂಬಂಧಿಸಿದಂತೆ ಎಲ್ಲಾ ಮೂಲ ಪ್ರಮಾಣ ಪತ್ರಗಳ (Original Certificates) ನೈಜತೆಯ ಬಗ್ಗೆ ಸಂಬಂಧಪಟ್ಟ ಮಂಡಳಿ/ವಿಶ್ವವಿದ್ಯಾಲಯಗಳ ಸಕ್ಷಮ ಪ್ರಾಧಿಕಾರಗಳಿಂದ ದೃಢೀಕರಣ ಪತ್ರಗಳನ್ನು ಪಡೆದಿರಬೇಕು.
8. ಅಭ್ಯರ್ಥಿಗಳ ವಿರುದ್ಧ ಅವರು ನೀಡಿದ ಖಾಯಂ ವಾಸಸ್ಥಳದ ವ್ಯಾಪ್ತಿಯ ಪೊಲೀಸ್ ಠಾಣೆ ಅಥವಾ ನ್ಯಾಯಾಲಯದಲ್ಲಿ ಕ್ರಿಮಿನಲ್ ಮೊಕದ್ದಮೆ ಇದೆಯೇ ಅಥವಾ ಇಲ್ಲವೇ ಎಂಬ ಬಗ್ಗೆ ಸಂಬಂಧಿಸಿದ ಸಕ್ಷಮ ಪ್ರಾಧಿಕಾರಿಗಳಿಂದ ಪ್ರಮಾಣ ಪತ್ರ ಸಲ್ಲಿಕೆಯಾದ ನಂತರವೇ ನೇಮಕಾತಿ ಆದೇಶವನ್ನು ಜಾರಿಗೊಳಿಸಲು ಸೂಚಿಸಲಾಗಿದೆ.
9. ಅಭ್ಯರ್ಥಿಗಳು ಅವರು ಕೋರಿದ ಮತ್ತು ಆಯ್ಕೆಯಾದ ವಿವಿಧ ಮೀಸಲಾತಿಗೆ ಸಂಬಂಧಿಸಿದಂತೆ ಸಕ್ಷಮ ಪ್ರಾಧಿಕಾರಗಳಿಂದ ಸಿಂಧುತ್ವ ಪ್ರಮಾಣ ಪತ್ರವನ್ನು ಪಡೆಯುವುದು.
10. ಆಯ್ಕೆಯಾದ ಅಭ್ಯರ್ಥಿಗಳ 5 ಭಾವಚಿತ್ರ, ಎಲ್ಲಾ ಮೂಲ ದಾಖಲೆಗಳನ್ನು ಹಾಗೂ ಒಂದು ಸೆಟ್ ಜೆರಾಕ್ಸ್ ಪ್ರತಿಗಳನ್ನು ಕಡ್ಡಾಯವಾಗಿ ಸ್ವೀಕರಿಸುವುದು.
11. ಆಯ್ಕೆಯಾದ ಅಭ್ಯರ್ಥಿಗಳ ಮೀಸಲಾತಿ ಆಧಾರಿತ ಪ್ರಮಾಣ ಪತ್ರಗಳನ್ನು ಪರಿಶೀಲನೆ ಮತ್ತು ದೃಢೀಕರಣಕ್ಕಾಗಿ ಸಂಬಂಧಪಟ್ಟ ಇಲಾಖೆ ಅಥವಾ ಪರಿಶೀಲನಾ ಸಮಿತಿಗಳಿಗೆ ಕೌನ್ಸಿಲಿಂಗ್ ವೇಳಾ ಪಟ್ಟಿಯಲ್ಲಿ ಸೂಚಿಸಿರುವಂತೆ ಕ್ರಮವಹಿಸುವುದು.
12. ಸದರಿ ಆಯ್ಕೆ ಹಾಗೂ ನೇಮಕಾತಿ, ಕರ್ನಾಟಕ ಆಡಳಿತ ನ್ಯಾಯ ಮಂಡಳಿ (ಕೆಎಟಿ) ಅಥವಾ ಕರ್ನಾಟಕ ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ವಿಚಾರಣಾಧೀನದಲ್ಲಿರುವ ರಿಟ್ ಅರ್ಜಿಗಳು ಮತ್ತು ಅಭ್ಯರ್ಥಿಗಳಿಂದ ಸಲ್ಲಿಸಲಾಗಿರುವ ಪ್ರಕರಣಗಳ ಕುರಿತಾಗಿ ಆಯಾ ನ್ಯಾಯಾಲಯದ ಅಂತಿಮ ತೀರ್ಪಿಗೊಳಪಟ್ಟಿರುತ್ತದೆ.
13. ಪ್ರಾಥಮಿಕ ಶಾಲಾ ಶಿಕ್ಷಕ ಅಭ್ಯರ್ಥಿಗಳ ನೇಮಕಾತಿಗೆ ಸಂಬಂಧಿಸಿದಂತೆ ಪ್ರತಿದಿನದ ವರದಿಯನ್ನು ನಿರ್ದೇಶಕರು, ಪ್ರಾಥಮಿಕ ಶಿಕ್ಷಣ, ಆಯುಕ್ತರ ಕಚೇರಿ, ಬೆಂಗಳೂರು ಮತ್ತು ವಿಶೇಷಾಧಿಕಾರಿಗಳು, ಸಿ.ಎ.ಸಿ, ಬೆಂಗಳೂರು ಇವರಿಗೆ ಕಡ್ಡಾಯವಾಗಿ ಇ-ಮೇಲ್ ಮೂಲಕ ಸಲ್ಲಿಸಲು ಸೂಚಿಸಲಾಗಿದೆ.

21/1/16
(ಕೆ.ಎಸ್.ಸತ್ಯಮೂರ್ತಿ)
ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ
ಬೆಂಗಳೂರು

ಗೆ,
ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳು (ಆಡಳಿತ) ಇವರಿಗೆ ಅಗತ್ಯ ಕ್ರಮಕ್ಕಾಗಿ